ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ
ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.
ಅಂತರ್ಜಾಲ : https://kptcl.karnataka.gov.in
ದೂರವಾಣಿ ಸಂಖ್ಯೆ : 080-22212343
ಇ–ಮೇಲ್ ವಿಳಾಸ : director.ahr.kptcl@gmail.com

**ಸಂಖ್ಯೆ:ಕವಿಪ್ರನಿನಿ/ಬಿ16/44934/2023-24** **ದಿನಾಂಕ:** 30 AUG 2023

## ಸುತ್ತೋಲೆ

**ವಿಷಯ:** ಡಿಪ್ಲೋಮಾ/ಇಂಜಿನಿಯರಿಂಗ್ ಪದವಿ ವಿದ್ಯಾರ್ಹತೆಯ ಮೇರೆಗೆ ನೇಮಕಾತಿ ಮಾಡಿಕೊಳ್ಳುವಾಗ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಸ್ಪಷ್ಟೀಕರಣ ಪಡೆಯುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 108 ಟಿಪಿಇ 2022 ದಿನಾಂಕ: 06.03.2023.

***

ತಾಂತ್ರಿಕ ಶಿಕ್ಷಣ ವಿಷಯಗಳಿಗೆ ಸಂಬಂಧಿಸಿದಂತೆ ಮುಕ್ತ ಮತ್ತು ದೂರ ಶಿಕ್ಷಣದ ಮೂಲಕ ಪಡೆದಿರುವ ಡಿಪ್ಲೋಮಾ/ಪದವಿ ವಿದ್ಯಾರ್ಹತೆಗೆ ಎ.ಐ.ಸಿ.ಟಿ.ಇ ನವದೆಹಲಿ ಇವರಿಂದ ಮಾನ್ಯತೆ ಇರುವುದಿಲ್ಲ. ಈ ರೀತಿಯಾಗಿ ಪಡೆದಿರುವ ಡಿಪ್ಲೋಮಾ/ಪದವಿ ವಿದ್ಯಾರ್ಹತೆಯನ್ನು ಪರಿಗಣಿಸಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು/ನಿಗಮ ಮಂಡಳಿಗಳು ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿ/ಮುಂಬಡ್ತಿಯಿಂದ ಭರ್ತಿ ಮಾಡಿರುವ ಪ್ರಕರಣಗಳು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದ್ದು, ಸದರಿ ವಿಷಯದಲ್ಲಿ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಸರ್ಕಾರವು ಸುತ್ತೋಲೆ ಸಂಖ್ಯೆ: ಇಡಿ 108 ಟಿಪಿಇ 2022 ದಿನಾಂಕ: 06.03.2023 ನ್ನು ಹೊರಡಿಸಿರುತ್ತದೆ **(ಅನುಬಂಧ-1)**.

ಆದ್ದರಿಂದ, ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಸರ್ಕಾರದ ದಿನಾಂಕ: 06.03.2023 ರ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

**ನಿರ್ದೇಶಕರು**
**(ಆಡಳಿತ ಮತ್ತು ಮಾ.ಸಂ.)**
**ಕವಿಪ್ರನಿನಿ**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಹಣಕಾಸು)/ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಆರ್.ಹೆಚ್.ಲಕ್ಷ್ಮೀಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.

ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/44934/2023-24

ದಿನಾಂಕ:30.08.2023 ರ ಅನುಬಂಧ-1



**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 108 ಟಿಪಿಇ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:06/03/2023.

**ಸುತ್ತೋಲೆ**

ವಿಷಯ:ಡಿಪ್ಲೋಮಾ/ಇಂಜಿನಿಯರಿಂಗ್ ಪದವಿ ವಿದ್ಯಾರ್ಹತೆಯ ಮೇರೆಗೆ ನೇಮಕಾತಿ ಮಾಡಿಕೊಳ್ಳುವಾಗ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಸ್ಪಷ್ಟೀಕರಣ ಪಡೆಯುವ ಬಗ್ಗೆ.

******

ತಾಂತ್ರಿಕ ಶಿಕ್ಷಣ ವಿಷಯಗಳಿಗೆ ಸಂಬಂಧಿಸಿದಂತೆ ಮುಕ್ತ ಮತ್ತು ದೂರ ಶಿಕ್ಷಣದ ಮೂಲಕ ಪಡೆದಿರುವ ಡಿಪ್ಲೋಮಾ/ಪದವಿ ವಿದ್ಯಾರ್ಹತೆಗೆ ಎಐಸಿಟಿಇ, ನವದೆಹಲಿ ಇವರಿಂದ ಮಾನ್ಯತೆ ಇರುವುದಿಲ್ಲ. ಆದರೆ, ಈ ರೀತಿಯಾಗಿ ಪಡೆದಿರುವ ಡಿಪ್ಲೋಮಾ/ಪದವಿ ವಿದ್ಯಾರ್ಹತೆಯನ್ನು ಪರಿಗಣಿಸಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು/ನಿಗಮ/ಮಂಡಳಿಗಳು ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿ/ಮುಂಬಡ್ತಿಯಿಂದ ಭರ್ತಿ ಮಾಡಿರುವ ಪ್ರಕರಣಗಳು ರಾಜ್ಯ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ, ಅಭ್ಯರ್ಥಿಗಳು ಮುಕ್ತ ಮತ್ತು ದೂರ ಶಿಕ್ಷಣದ ಮೂಲಕ ವಿವಿಧ ವಿಶ್ವವಿದ್ಯಾಲಯಗಳು/ಪರೀಕ್ಷಾ ಮಂಡಳಿಯಿಂದ ಪಡೆದಿರುವ ಡಿಪ್ಲೋಮಾ/ ಇಂಜಿನಿಯರಿಂಗ್ ಪದವಿ ವಿದ್ಯಾರ್ಹತೆಯನ್ನು ಪರಿಗಣಿಸಿ ವಿವಿಧ ಇಲಾಖೆಗಳು/ ನಿಗಮಗಳು/ ಮಂಡಳಿಗಳು/ ವಿಶ್ವವಿದ್ಯಾಲಯಗಳು ನೌಕರರುಗಳಿಗೆ ಈಗಾಗಲೇ ನೇಮಕಾತಿ/ಪದೋನ್ನತಿಯನ್ನು ನೀಡಿದ್ದಲ್ಲಿ, ಅಂತಹ ಎಲ್ಲಾ ನೇಮಕಾತಿಯನ್ನು ಕೂಡಲೇ ಹಿಂಪಡೆಯುವಂತೆ ಸೂಚಿಸಲಾಗಿದೆ.

ಮುಂದುವರೆದು, ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಡಿಪ್ಲೋಮಾ/ಇಂಜಿನಿಯರಿಂಗ್ ಪದವಿ ವಿದ್ಯಾರ್ಹತೆಯ ಮೇರೆಗೆ ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿ/ಮುಂಬಡ್ತಿಯಿಂದ ಭರ್ತಿ ಮಾಡುವ ಸಂದರ್ಭದಲ್ಲಿ ಅಭ್ಯರ್ಥಿಗಳು ಸಲ್ಲಿಸುವ ಡಿಪ್ಲೋಮಾ/ಇಂಜಿನಿಯರಿಂಗ್ ಪದವಿ ವಿದ್ಯಾರ್ಹತೆಯ ಮಾನ್ಯತೆ ಹಾಗೂ ತಾಂತ್ರಿಕ ಸಮಸ್ಯೆಗಳ ಕುರಿತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಸ್ಪಷ್ಟೀಕರಣ ಪಡೆಯುವಂತೆ ತಿಳಿಸಲಾಗಿದೆ.

(ನರಸಿಂಹಪ್ಪ)
ಸರ್ಕಾರದ ಜಂಟಿ ಕಾರ್ಯದರ್ಶಿ,
(ತಾಂತ್ರಿಕ ಮತ್ತು ಯೋಜನೆ)
ಉನ್ನತ ಶಿಕ್ಷಣ ಇಲಾಖೆ